**ಸಾಕ್ಷಿಯನ್ನು ದಿಃ 19.09.2024 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2 ನೇ ಎದುರುದಾರರ ಪರ ವಕೀಲರಿಂದಃ**

ನನ್ನ ವಯಸ್ಸಿನ ಬಗ್ಗೆ ದಾಖಲೆ ಹಾಜರು ಪಡಿಸಿರುವುದಿಲ್ಲ ಎಂದರೆ ಸರಿ. ನನಗೆ ಚಾಲನ ಪರವಾನಗಿ ಇದೆ ಅದನ್ನು ಹಾಜರು ಪಡಿಸಲು ತೊಂದರೆ ಇಲ್ಲ. ಅಪಘಾತವು ರಸ್ತೆಯ ಮಧ್ಯಭಾಗದಲ್ಲಿ ಆಗಿರುತ್ತದೆ ಎಂದರೆ ಸರಿ. ನಾನು ಸ್ಪಂದನಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ. ಆಸ್ಪತ್ರೆಯಲ್ಲಿ ಅಪಘಾತ ಹೇಗೆ ಆಯಿತು ಎಂದು ಮಾಹಿತಿ ನೀಡಿರುತ್ತೇನೆ. ಎಂ.ಎಲ್.ಸಿ. ಎಕ್ಸಟ್ರಾಕ್ಟ್ ಅನ್ನು ಹಾಜರು ಪಡಿಸಲು ತೊಂದರೆ ಇಲ್ಲ. ಅಪಘಾತಕ್ಕೆ ಸಂಬಂಧಿಸಿದಂತೆ ದೂರನ್ನು ನನ್ನ ಅಣ್ಣ ದಾಖಲಿಸಿರುತ್ತಾರೆ. ಯಾವಾಗ ದಾಖಲಿಸುತ್ತಾರೆ ಎಂದು ಗೊತ್ತಿಲ್ಲ. ವೈದ್ಯರು ನನಗೆ ಶಸ್ತ್ರ ಚಿಕಿತ್ಸೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಎರಡು ಕೆನ್ನೆಗೆ, ಮೂಗಿಗೆ ಶಸ್ತ್ರ ಚಿಕಿತ್ಸೆ ಮಾಡಿ ಪ್ಲೇಟ್ ಹಾಕಿರುತ್ತಾರೆ. ಆಸ್ಪತ್ರೆಯಿಂದ ಬಿಡುಗಡೆಯಾದ ನಂತರ 30 ಬಾರಿ ಮುಂದುವರೆದ ಚಿಕಿತ್ಸೆಗೆ ಹೋಗಿರುತ್ತೇನೆ. ಸದರಿ ದಾಖಲೆ ಹಾಜರು ಪಡಿಸಲು ತೊಂದರೆ ಇಲ್ಲ.

ಅಪಘಾತಕ್ಕೂ ಮೊದಲು ನಾನು ವ್ಯವಸಾಯ ಮಾಡುತ್ತಿದ್ದೆ. ಆರ್.ಟಿ.ಸಿ ನನ್ನ ತಾಯಿಯ ಹೆಸರಿನಲ್ಲಿದೆ. ಈಗ ವ್ಯವಸಾಯ ಮಾಡುತ್ತಿಲ್ಲ. ತಿಂಗಳಿಗೆ ರೂ. 25,000/- ಸಂಪಾದನೆ ಮಾಡುತ್ತಿದ್ದೆ ಎಂದು ತೋರಿಸಲು ದಾಖಲೆ ಹಾಜರು ಪಡಿಸಿರುವುದಿಲ್ಲ ಎಂದರೆ ಸರಿ. ಅಪಘಾತ ನನ್ನ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ಅಪಘಾತದಿಂದ ಸಣ್ಣಪುಟ್ಟ ಗಾಯಗಳಾಗಿದ್ದು ನಾನು ಆರಾಮಾಗಿದ್ದೇನೆ ಎಂದರೆ ಸರಿಯಲ್ಲ. ಔಷಧಿ ಪಾವತಿ ರಶೀದಿಗಳಷ್ಟು ಖರ್ಚು ಆಗಿರುವುದಿಲ್ಲ ಹೆಚ್ಚಿನ ಪರಿಹಾರ ಪಡೆಯಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.